All India Radio: Bangalore
National Bulletin In Kannada
20.01.2025 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**<><><><>**

ಮುಖ್ಯಾಂಶಗಳು

- ಸ್ವಿಟ್ಜರ್ಲೆಂಡನ ದಾವೋಸ್‌ನಲ್ಲಿಂದು ವಿಶ್ವ ಆರ್ಥಿಕ ವೇದಿಕೆಯ ವಾರ್ಷಿಕ ಸಭೆಗೆ ಚಾಲನೆ ; ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ನೇತೃತ್ವದಲ್ಲಿ ಭಾರತೀಯ ನಿಯೋಗ ಭಾಗಿ
- ದೆಹಲಿ ವಿಧಾನಸಭಾ ಚುನಾವಣೆ : ೭೦ ಸ್ಥಾನಗಳಿಗೆ ೭೧೯ ಅಭ್ಯರ್ಥಿಗಳು ಕಣದಲ್ಲಿ ; ಉಮೇದುವಾರಿಕೆ ಹಿಂಪಡೆಯಲು ಇಂದು ಕೊನೆಯ ದಿನ
- ಅಮೆರಿಕದ ೪೭ನೇ ಅಧ್ಯಕ್ಷರಾಗಿ ಇಂದು ಡೋನಾಲ್ಡ್ ಟ್ರಂಪ್ ಪ್ರಮಾಣವಚನ ಸ್ವೀಕಾರ
- ಉದ್ಘಾಟನಾ ಖೋ ಖೋ ವಿಶ್ವಕಪ್ : ಪುರುಷರ ಹಾಗೂ ಮಹಿಳಾ ತಂಡಗಳಿಗೆ ಚೊಚ್ಚಲ ವಿಶ್ವಕಪ್ ಕಿರೀಟ

<><><><>

ಸ್ವಿಟ್ಜರ್ಲೆಂಡ್‌ನ ದಾವೋಸ್‌ನಲ್ಲಿ ಇಂದಿನಿಂದ ೫೫ನೇ ವಿಶ್ವ ಆರ್ಥಿಕ ವೇದಿಕೆ ೨೦೨೫ ಆರಂಭವಾಗಲಿದೆ. ಐದು ದಿನಗಳ ಕಾಲ ನಡೆಯುವ ಕಾರ್ಯಕ್ರಮದಲ್ಲಿ ಭಾಗವಹಿಸುವ ಭಾರತೀಯ ನಿಯೋಗದ ನೇತೃತ್ವವನ್ನು ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ವಹಿಸಲಿದ್ದು, ಈ ಸಂದರ್ಭದಲ್ಲಿ ಅವರು, ದೇಶದ ಅಭಿವೃದ್ಧಿ ಮಾದರಿಗಳ ಕುರಿತು ಪ್ರಸ್ತಾಪಿಸಲಿದ್ದಾರೆ. ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್, ನಾಗರಿಕ ವಿಮಾನಯಾನ ಸಚಿವ ಕೆ. ರಾಮ್‌ಮೋಹನ್ ನಾಯ್ಡು, ಆಹಾರ ಸಂಸ್ಕರಣಾ ಕೈಗಾರಿಕಾ ಸಚಿವ ಚಿರಾಗ್ ಪಾಸ್ವಾನ್, ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಖಾತೆ ರಾಜ್ಯ ಸಚಿವ ಜಯಂತ್ ಚೌಧರಿ ಮತ್ತಿತರರು ನಿಯೋಗದಲ್ಲಿ ಇದ್ದಾರೆ.

ಈ ಕುರಿತು ಒಂದು ವರದಿ:

ಈ ವಾರ್ಷಿಕ ಸಭೆ ಜಾಗತಿಕ ನಾಯಕರಿಗೆ ಜಾಗತಿಕ ಹಾಗೂ ಪ್ರಾದೇಶಿಕ ಸವಾಲುಗಳ ಕುರಿತು ಸಮಾಲೋಚಿಸಿ ವೇದಿಕೆ ಒದಗಿಸುತ್ತದೆ. ಈ ಕಾರ್ಯಕ್ರಮದಲ್ಲಿ ಭಾರತದ ಭಾಗವಹಿಸುವಿಕೆಯು ಪಾಲುದಾರಿಕೆಗಳ ಬಲವರ್ಧನೆ, ಹೂಡಿಕೆಗಳ ಆಕರ್ಷಣೆ ಮತ್ತು ಸುಸ್ಥಿರ ಬೆಳವಣಿಗೆ ಮತ್ತು ತಂತ್ರಜ್ಞಾನ ಆವಿಷ್ಕಾರಗಳಲ್ಲಿ ಜಾಗತಿಕ ಮುಂದಾಳತ್ವದ ಸ್ಥಾನದಲ್ಲಿ ದೇಶವನ್ನಿರಿಸುವ ಗುರಿ ಹೊಂದಿದೆ. ಆರು ರಾಜ್ಯಗಳಾದ ಆಂಧ್ರಪ್ರದೇಶ, ಮಹಾರಾಷ್ಟ್ರ, ತೆಲಂಗಾಣ, ತಮಿಳುನಾಡು, ಉತ್ತರಪ್ರದೇಶ ಮತ್ತು ಕೇರಳದ ಉನ್ನತ ಮಟ್ಟದ ಪ್ರತಿನಿಧಿಗಳ ತಂಡ ತಮ್ಮ ತಮ್ಮ ಪ್ರದೇಶದಲ್ಲಾಗಿರುವ ಕೈಗಾರಿಕಾ ಅಭಿವೃದ್ಧಿ, ಹೂಡಿಕೆಗಳ ಅವಕಾಶಗಳು ಮತ್ತು ಪರಿವರ್ತನೆಯಾಗುತ್ತಿರುವ ಭಾರತದ ಆರ್ಥಿಕತೆಗೆ ಸಂಬಂಧಿಸಿದ ಯಶೋಗಾಥೆಗಳನ್ನು ಅನಾವರಣಗೊಳಿಸಲಿದೆ. ಸಭೆಯಲ್ಲಿ ಒಳಗೊಳ್ಳುವ ಅಭಿವೃದ್ಧಿ, ಸಾಮಾಜಿಕ, ಭೌತಿಕ ಮತ್ತು ಡಿಜಿಟಲ್ ಮೂಲಸೌಕರ್ಯದಲ್ಲಿ ಹೂಡಿಕೆ ಸೇರಿದಂತೆ ಪ್ರಮುಖ ವಿಷಯಗಳ ಕುರಿತು ಚರ್ಚೆ ನಡೆಯಲಿದೆ. ತಮ್ಮ ಭೇಟಿಗೆ ಮುನ್ನ ಮಾತನಾಡಿದ ಸಚಿವರು, ಸಮಾಜದ ಎಲ್ಲಾ ವರ್ಗಗಳಿಗೆ, ವಿಶೇಷವಾಗಿ ಬಹಳ ಕಾಲದಿಂದಲೂ ಅಭಿವೃದ್ಧಿಯಿಂದ ಹೊರಗುಳಿದವರಿಗೆ ಅಭಿವೃದ್ಧಿಯನ್ನು ಖಾತ್ರಿಪಡಿಸುವಲ್ಲಿ ದೇಶದ ಮಹತ್ವದ ದಾಪುಗಾಲುಗಳನ್ನು ಒತ್ತಿ ಹೇಳಿದರು. ಐದು ದಿನಗಳ ಸಮಾರಂಭದಲ್ಲಿ ಅಂತರ್ಗತ ಬೆಳವಣಿಗೆ, ಸಾಮಾಜಿಕ, ಭೌತಿಕ ಮತ್ತು ಡಿಜಿಟಲ್ ಮೂಲಸೌಕರ್ಯದಲ್ಲಿ ಹೂಡಿಕೆ ಮತ್ತು ತಂತ್ರಜ್ಞಾನವನ್ನು ಸಮಗ್ರಗೊಳಿಸುವ ಬಗ್ಗೆ ವಿವರವಾದ ಚರ್ಚೆ ನಡೆಯಲಿದೆ ಎಂದು ಹೇಳಿದರು.

<><><>

ದೆಹಲಿ ವಿಧಾನಸಭಾ ಚುನಾವಣೆಗೆ ನಾಮಪತ್ರ ಹಿಂಪಡೆಯಲು ಇಂದು ಕೊನೆಯ ದಿನವಾಗಿದೆ. ೭೦ ಸ್ಥಾನಗಳಿಗೆ ಒಟ್ಟು ೭೧೯ ಅಭ್ಯರ್ಥಿಗಳು ಕಣದಲ್ಲಿದ್ದು, ನವದೆಹಲಿ ವಿಧಾನಸಭಾ ಕ್ಷೇತ್ರದಲ್ಲಿ ಅತಿ ಹೆಚ್ಚು ೨೩ ಅಭ್ಯರ್ಥಿಗಳು, ಪಟೇಲ್ ನಗರ ಮತ್ತು ಕಸ್ತೂರ್ಬಾ ನಗರ ಕ್ಷೇತ್ರಗಳಲ್ಲಿ ಕನಿಷ್ಠ ಐದು ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಮುಖ್ಯ ಚುನಾವಣಾ ಅಧಿಕಾರಿಯ ಪ್ರಕಾರ, ಒಂದು ಸಾವಿರದ ೫೨೨ ನಾಮಪತ್ರಗಳಲ್ಲಿ ಒಟ್ಟು ೪೭೭ ನಾಮಪತ್ರಗಳು ತಿರಸ್ಕೃತಗೊಂಡಿವೆ. ದೆಹಲಿ ವಿಧಾನಸಭಾ ಚುನಾವಣೆಗೆ ಮುಂದಿನ ತಿಂಗಳು ೫ ರಂದು ಮತದಾನ ನಡೆಯಲಿದ್ದು, ಫೆಬ್ರವರಿ ೮ ರಂದು ಎಣಿಕೆ ನಡೆಯಲಿದೆ.

<><><>

ಡೊನಾಲ್ಡ್ ಟ್ರಂಪ್ ಇಂದು ಅಮೆರಿಕದ ೪೭ನೇ ಅಧ್ಯಕ್ಷರಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ವಾಷಿಂಗ್‌ಟನ್ ಡಿಸಿಯಲ್ಲಿ ಅಮೆರಿಕದ ಮುಖ್ಯ ನ್ಯಾಯಮೂರ್ತಿ ಜಾನ್ ರಾಬರ್ಟ್ಸ್ ಅವರ ಸಮ್ಮುಖದಲ್ಲಿ ಅಧ್ಯಕ್ಷೀಯ ಪ್ರಮಾಣವಚನ ನಡೆಯಲಿದೆ. ಪ್ರಮಾಣವಚನ ಸಮಾರಂಭವು ಭಾರತೀಯ ಕಾಲಮಾನ ರಾತ್ರಿ ೮:೩೦ ಕ್ಕೆ ಪ್ರಾರಂಭವಾಗಲಿದೆ. ಟ್ರಂಪ್ ಅವರು ಅಧಿಕೃತ ಅಧಿಕಾರ ವರ್ಗಾವಣೆಯ ಭಾಗವಾಗಿ ತಮ್ಮ ಉದ್ಘಾಟನಾ ಭಾಷಣವನ್ನು ಮಾಡಲಿದ್ದು, ಜೆಡಿ ವ್ಯಾನ್ಸ್ ಅವರು ಅಮೆರಿಕದ ಉಪಾಧ್ಯಕ್ಷರಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ.

ಹಲವಾರು ವಿದೇಶಿ ನಾಯಕರು ಪ್ರಮಾಣವಚನ ಸಮಾರಂಭದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್ ಜೈಶಂಕರ್ ಅವರು ಸಮಾರಂಭದಲ್ಲಿ ಭಾರತವನ್ನು ಪ್ರತಿನಿಧಿಸಲಿದ್ದಾರೆ. ಅವರ ಜೊತೆಗೆ ಅರ್ಜೆಂಟೀನಾ ಅಧ್ಯಕ್ಷ ಜೇವಿಯರ್ ಮಿಲಿ, ಇಟಲಿಯ ಪ್ರಧಾನಿ ಜಾರ್ಜಿಯಾ ಮೆಲೋನಿ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

<><><><>

ಮುಂಬರುವ ಗಣರಾಜ್ಯೋತ್ಸವ ದಿನಾಚರಣೆ, ಮೌನಿ ಅಮವಾಸ್ಯೆ ಮತ್ತು ಬಸಂತ ಪಂಚಮಿ ಅಮೃತ ಸ್ನಾನಗಳ ಪೂರ್ವಭಾವಿಯಾಗಿ ಮಹಾಕುಂಭ ಮೇಳದಲ್ಲಿ ಜನ ಸಂದಣಿ ನಿರ್ವಹಣೆ ಮತ್ತು ಸಂಪರ್ಕ ಜಾಲಗಳನ್ನು ಉನ್ನತೀಕರಿಸಲು ಉತ್ತರಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಇದೇ ೨೯ ರಂದು ಮತ್ತು ಫೆಬ್ರವರಿ ೩ ರ ಅಮೃತ ಸ್ನಾಗಳಿಗೆ ಸದೃಢ ಭದ್ರತಾ ವ್ಯವಸ್ಥೆ ಕಲ್ಪಿಸಲು ಅವರು ಸೂಚಿಸಿದರು. ನಿನ್ನೆ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಪ್ರಯಾಗ್ ರಾಜ್‌ನಲ್ಲಿ ಕುಂಭಮೇಳ ಪ್ರದೇಶದ ಪರಿಶೀಲನೆ ನಡೆಸಿ, ನಂತರ ಅಧಿಕಾರಿಗಳಿಗೆ ಸೂಕ್ತ ಸೂಚನೆಗಳನ್ನು ನೀಡಿದರು.

ಈ ಕುರಿತು ಅಲ್ಲಿನ ಪ್ರತಿನಿಧಿ ಹೆಚ್ಚಿನ ಮಾಹಿತಿ ನೀಡಿದ್ದಾರೆ.

<><><><>

ಭಾರತ ಸಂವಿಧಾನವನ್ನು ಅಳವಡಿಸಿಕೊಂಡು ೭೫ ವರ್ಷಗಳನ್ನು ಆಚರಿಸುತ್ತಿರುವ ಈ ಸಂದರ್ಭದಲ್ಲಿ ಅಂಚೆ ಇಲಾಖೆಯು ನವದೆಹಲಿಯ ರಾಷ್ಟ್ರೀಯ ಅಂಚೆ ಚೀಟಿ ಸಂಗ್ರಹಾಲಯದಲ್ಲಿ ಇಂದಿನಿಂದ ೩ ದಿನಗಳ ಕಾಲ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಿದೆ.

ಈ ಕುರಿತು ಒಂದು ವರದಿ :

ರಾಷ್ಟ್ರೀಯ ಅಂಚೆ ಚೀಟಿ ಸಂಗ್ರಹಾಲಯದಲ್ಲಿ ನಡೆಯಲಿರುವ ಈ ಕಾರ್ಯಕ್ರಮದಲ್ಲಿ ಎಲ್ಲ ವಯಸ್ಸಿನ ಪ್ರವಾಸಿಗರಿಗೆ ವಿವಿಧ ಆಕರ್ಷಕ ಚಟುವಟಿಕೆಗಳನ್ನು ಆಯೋಜಿಸಲಾಗಿದೆ. ರಸಪ್ರಶ್ನೆ, ಪ್ರದರ್ಶನ, ಅಂಚೆ ಚೀಟಿ ಸಫಾರಿ ಮತ್ತು ಪತ್ರ ಬರೆಯುವ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ಈ ಕಾರ್ಯಕ್ರಮವು ಸಂವಿಧಾನದಲ್ಲಿ ಪ್ರತಿಪಾದಿಸಲಾದ ಮೌಲ್ಯಗಳನ್ನು ಬಿಂಬಿಸುವಲ್ಲಿ ನಾಗರಿಕರು ತೊಡಗಿಸಿಕೊಳ್ಳುವುದರ ಜೊತೆಗೆ ಏಕತೆ ಮತ್ತು ರಾಷ್ಟ್ರೀಯ ಪ್ರಜ್ಞೆಯನ್ನು ಬೆಳೆಸುವ ಗುರಿಯನ್ನು ಹೊಂದಿದೆ ಎಂದು ಕೇಂದ್ರ ಸಂವಹನ ಸಚಿವಾಲಯವು ತಿಳಿಸಿದೆ.

<><><>

ಭಾರತ್ ಮೊಬಿಲಿಟಿ ಗ್ಲೋಬಲ್ ಎಕ್ಸ್‌ಪೊ - ೨೦೨೫ರಲ್ಲಿ ನವದೆಹಲಿಯ ಭಾರತ್ ಮಂಟಪಂನಲ್ಲಿ ನಿನ್ನೆ ೨೨ ವಿಭಿನ್ನ ಬ್ರ್ಯಾಂಡ್‌ಗಳಿಂದ ೫೬ ಹೊಸ ಉತ್ಪನ್ನಗಳು ಬಿಡುಗಡೆಯಾಗಿವೆ. ಸೂಪರ್ ಬೈಕ್‌ಗಳು, ಕಾರುಗಳು, ಬಸ್‌ಗಳು ಮತ್ತು ಆಂಬ್ಯುಲೆನ್ಸ್‌ಗಳಿಂದ ಹಿಡಿದು ವಿವಿಧ ಸುಧಾರಿತ ವಾಹನಗಳನ್ನು ಇಲ್ಲಿ ಪ್ರದರ್ಶಿಸಲಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ತಿಳಿಸಿದೆ. ಪ್ರಧಾನಿ ನರೇಂದ್ರ ಮೋದಿ ಅವರು, ಜನವರಿ ೧೭ ರಂದು ಭಾರತ್ ಮೊಬಿಲಿಟಿ ಗ್ಲೋಬಲ್ ಎಕ್ಸ್‌ಪೊ ಗೆ ಚಾಲನೆ ನೀಡಿದ್ದರು. ಒಟ್ಟು ೬ ದಿನಗಳ ಕಾಲ ನವದೆಹಲಿಯ ಭಾರತ್ ಮಂಟಪಂ ಮತ್ತು ಯಶೋಭೂಮಿ ಹಾಗೂ ಗ್ರೇಟರ್ ನೋಯ್ಡಾದ ಇಂಡಿಯಾ ಎಕ್ಸ್‌ಪೊ ಸೆಂಟರ್ ಮತ್ತು ಮಾರ್ಟ್‌ನಲ್ಲಿ ಈ ಎಕ್ಸ್‌ಪೊ ನಡೆಯುತ್ತಿದೆ.

<><><>

ನೌಕರ ಭವಿಷ್ಯ ನಿಧಿ ಸಂಸ್ಥೆ - ಇಪಿಎಫ್‌ಒ, ಸದಸ್ಯರ ಪ್ರೊಫೈಲ್‌ಗಳನ್ನು ನವೀಕರಿಸುವ ಆನ್‌ಲೈನ್ ಪ್ರಕ್ರಿಯೆಯನ್ನು ಸರಳಗೊಳಿಸಿದೆ. ಆಧಾರ್ ಮೂಲಕ ಸಾರ್ವತ್ರಿಕ ಖಾತೆ ಸಂಖ್ಯೆಯನ್ನು ಈಗಾಗಲೇ ಅಪ್‌ಡೇಟ್ ಮಾಡಿರುವ ಸದಸ್ಯರು, ಯಾವುದೇ ದಾಖಲೆಗಳನ್ನು ಅಪ್‌ಲೋಡ್ ಮಾಡುವ ಅಗತ್ಯವಿಲ್ಲದೇ ತಮ್ಮ ಪ್ರೊಫೈಲ್ ಅನ್ನು ಹೆಸರು, ಹುಟ್ಟಿದ ದಿನಾಂಕ, ಲಿಂಗ, ರಾಷ್ಟ್ರೀಯತೆ, ತಂದೆ ಅಥವಾ ತಾಯಿಯ ಹೆಸರು ಮತ್ತು ಸೇರಿದ ದಿನಾಂಕವನ್ನು ನವೀಕರಿಸಬಹುದಾಗಿದೆ ಎಂದು ಇಪಿಎಫ್‌ಒ ತಿಳಿಸಿದೆ.

<><><>

ದೆಹಲಿಯ ಸರ್ಕಾರಿ ನೌಕರರಿಗೆ ನಿವೃತ್ತಿ ನಂತರ ಮನೆ ನಿರ್ಮಾಣ ನಿಟ್ಟಿನಲ್ಲಿ ಸಬ್ಸಿಡಿ ದರದಲ್ಲಿ ಭೂಮಿಯನ್ನು ಮಂಜೂರು ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಆಮ್ ಆದ್ಮಿ ಪಕ್ಷದ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ಒತ್ತಾಯಿಸಿದ್ದಾರೆ. ದೆಹಲಿ ವಿಧಾನಸಭೆ ಚುನಾವಣೆ ಹಿನ್ನೆಲೆಯಲ್ಲಿ, ದೆಹಲಿ ಮಾಜಿ ಮುಖ್ಯಮಂತ್ರಿಯಿಂದ ಈ ಬೇಡಿಕೆ ಕೇಳಿಬಂದಿದೆ. ನವದೆಹಲಿಯಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೆಹಲಿ ಸರ್ಕಾರವು ಮನೆಗಳನ್ನು ನಿರ್ಮಿಸಲು, ಭೂಮಿ ಮಂಜೂರು ಮಾಡುವಂತೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆಯಲಾಗಿದೆ ಎಂದು ತಿಳಿಸಿದ್ದಾರೆ. ಪೌರ ಕಾರ್ಮಿಕರಿಂದ ಆರಂಭಗೊಂಡು ಎಲ್ಲ ನಿವೃತ್ತ ಸರ್ಕಾರಿ ನೌಕರರಿಗೆ ಭೂಮಿ ಹಂಚಿಕೆಯಾಗಬೇಕು ಎಂದು ಇದೇ ವೇಳೆ ಅವರು ಒತ್ತಾಯಿಸಿದ್ದಾರೆ.  ಈ ನಡುವೆ, ಪಂಜಾಬ್ ಮತ್ತು ದೆಹಲಿಯ ಮಹಿಳೆಯರಿಗೆ ಪ್ರತಿ ತಿಂಗಳು ಒಂದು ಸಾವಿರ ರೂಪಾಯಿ ನೀಡುವ ಭರವಸೆಯನ್ನು ಆಮ್ ಆದ್ಮಿ ಪಕ್ಷವು ಈಡೇರಿಸಿಲ್ಲ ಎಂದು ಬಿಜೆಪಿ ನಾಯಕ ರವನೀತ್ ಸಿಂಗ್ ಬಿಟ್ಟು ಆರೋಪಿಸಿದ್ದಾರೆ.

<><><>

ನವದೆಹಲಿಯ ಇಂದಿರಾ ಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ನಡೆದ ೨೦೨೫ ರ ಖೋ ಖೋ ವಿಶ್ವಕಪ್ ಉದ್ಘಾಟನಾ ಆವೃತ್ತಿಯಲ್ಲಿ, ಭಾರತೀಯ ಮಹಿಳಾ ಮತ್ತು ಪುರುಷರ ತಂಡಗಳು ವಿಶ್ವ ಚಾಂಪಿಯನ್‌ಗಳಾಗಿ ಹೊರಹೊಮ್ಮಿದ್ದಾರೆ.  ವಿಶ್ವಕಪ್‌ನ ಅಂತಿಮ ಪಂದ್ಯದಲ್ಲಿ ನೇಪಾಳ ಮಹಿಳಾ ತಂಡದ ವಿರುದ್ಧ ೭೮-೪೦ ಅಂಕಗಳ ಅಂತರದಲ್ಲಿ  ಭಾರತದ ಮಹಿಳಾ ತಂಡ ಭರ್ಜರಿ ಜಯ ಸಾಧಿಸಿತು.  ನಂತರ ನಡೆದ ಪುರುಷರ ಫೈನಲ್ ಪಂದ್ಯದಲ್ಲಿ, ಭಾರತ ತಂಡ ನೇಪಾಳವನ್ನು ೫೪-೩೬ ಅಂಕಗಳಿಂದ ಸೋಲಿಸಿದರು. ಪಂದ್ಯದ ನಂತರ ಮಾತನಾಡಿದ ಭಾರತೀಯ ಮಹಿಳಾ ತಂಡದ ತರಬೇತುದಾರರಾದ ಸುಮಿತ್ ಭಾಟಿಯಾ ನೇಪಾಳದ ಪ್ರಯತ್ನಗಳನ್ನು ಶ್ಲಾಘಿಸಿದರು. ನೇಪಾಳ ಮಹಿಳಾ ತಂಡ ಉತ್ತಮ ಪ್ರದರ್ಶನವನ್ನು ನೀಡಿದರೂ, ತಮ್ಮೆಲ್ಲರ ತಂತ್ರಗಳು ಈ ಗೆಲುವನ್ನು ಖಚಿತಪಡಿಸಿಕೊಳ್ಳಲು ಸಹಾಯ ಮಾಡಿದವು ಎಂದು ಹೇಳಿದರು. ಈ ಗೆಲುವು ಆಟಗಾರರು ಮತ್ತು ತರಬೇತುದಾರರ ಕಠಿಣ ಪರಿಶ್ರಮ ಮತ್ತು ಸಮರ್ಪಣೆಯ ಫಲ ಎಂದು ಮಹಿಳಾ ತಂಡದ ನಾಯಕಿ ಪ್ರಿಯಾಂಕಾ ಇಂಗಲ್ ಹೇಳಿದ್ದಾರೆ.

<><><>

ನದೆರ್‌ಲ್ಯಾಂಡ್‌ನ ವಿಚ್ಕ್ ಆನ್ ಜೀ ಯಲ್ಲಿ ನಡೆದ ಟಾಟಾ ಸ್ಟೀಲ್ ಚೆಸ್ ಪಂದ್ಯಾವಳಿಯ ಮೊದಲ ಸುತ್ತಿನ ಪಂದ್ಯದಲ್ಲಿ ಹಾಲ್ಯಾಂಡ್‌ನ ಅನೀಶ್ ಗಿರಿ ವಿರುದ್ಧ ವಿಶ್ವ ಚಾಂಪಿಯನ್ ಡಿ ಗುಕೇಶ್ ಗೆಲುವು ಸಾಧಿಸಿದ್ದಾರೆ.

<><><><>

ನಟ ಸೈಫ್ ಅಲಿ ಖಾನ್ ಮೇಲಿನ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ಮಹಾರಾಷ್ಟ್ರದ ಥಾಣೆಯಿಂದ ಮೊಹಮ್ಮದ್ ಶರೀಫುಲ್ ಇಸ್ಲಾಂ ಶಹಜಾದ್ ಎಂಬ ವ್ಯಕ್ತಿಯನ್ನು ಬಂಧಿಸಲಾಗಿದೆ ಎಂದು ಮುಂಬೈ ಪೊಲೀಸರು ತಿಳಿಸಿದ್ದಾರೆ. ಈ ವ್ಯಕ್ತಿ ಮೂಲತಃ ಬಾಂಗ್ಲಾದೇಶದವನಾಗಿರಬಹುದು ಎಂದು ಪೊಲೀಸರು ಸಂಶಯ ವ್ಯಕ್ತಪಡಿಸಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>